ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಇ-ಆಡಳಿತ ಇತರೆ 02/2016-17 ದಿನಾಂಕ :22-04-2016.

## ಸುತ್ತೋಲೆ

ವಿಷಯ: ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಅನುಷ್ಠಾನಗೊಳಿಸಿರುವ ಕಾಗದರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಎಲ್ಲಾ ಶಾಲೆಗಳಲ್ಲಿ ಬಳಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಇ ಆಡಳಿತ ಇತರೆ 01/2014-15 ದಿನಾಂಕ:16.05.2015.

2. ಸರ್ಕಾರದ ಆದೇಶ ಸಂಖ್ಯೆ: ಕಂಇ 44 ಭೂದಾಅ 2014 ದಿನಾಂಕ: 31.10.2015.

3. ಆಯುಕ್ತರು, ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಮತ್ತು ನಿರ್ದೇಶಕರು, ಅಟಲ್ ಜೀ ಜನಸ್ನೇಹಿ ನಿರ್ದೇಶನಾಲಯ, ಕೆ.ಆರ್. ವೃತ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಂಇ/ಎಜೆಎಸ್ಕೆ/ಆಡಳಿತ-45/2012-13 ದಿನಾಂಕ: 22.04.2016.

******

ಉಲ್ಲೇಖಿತ (2)ರ ಸರ್ಕಾರದ ಆದೇಶ ಹಾಗೂ ಉಲ್ಲೇಖ(3)ರ ಪತ್ರಗಳಲ್ಲಿ ಕಾಗದರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಅಳವಡಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ. (ಉಲ್ಲೇಖ(3)ರ ಪತ್ರದ ಪ್ರತಿಯನ್ನು ಲಗತ್ತಿಸಿದೆ.)

ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ಕಾಗದ ರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಅನುಷ್ಠಾನಗೊಳಿಸಲಾಗಿರುವುದರಿಂದ, ಸರ್ಕಾರದ ವಿವಿಧ ಇಲಾಖೆಗಳು ಫಲಾನುಭವಿಗಳಿಗೆ ನೀಡುವ ವಿವಿಧ ಸೌಲಭ್ಯಗಳಿಗಾಗಿ ಮುದ್ರಿಸಿದ ಮೂಲ ಪ್ರಮಾಣ ಪತ್ರಗಳಿಗಾಗಿ ಕಡ್ಡಾಯ ಪಡಿಸದೇ, ರಾಜ್ಯದ ಎಲ್ಲಾ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಕಾಗದ ರಹಿತ ಪ್ರಮಾಣ ಪತ್ರಗಳ ಸೇವೆಯಲ್ಲಿ ಪ್ರಮಾಣ ಪತ್ರಗಳಿಗೆ ನೀಡುವ ವಿಶಿಷ್ಟ ಸಂಖ್ಯೆಯನ್ನು ಅಂಗೀಕರಿಸಿಕೊಂಡು ಪ್ರಮಾಣ ಪತ್ರದ ನೈಜತೆಯನ್ನು ನಾಡಕಛೇರಿ ವೆಬ್‌ಸೈಟ್/ವೆಬ್ ಸರ್ವೀಸ್ ಮೂಲಕ ಪರಿಶೀಲಿಸಿ, ಸಾರ್ವಜನಿಕರಿಗೆ/ ಫಲಾನುಭವಿಗಳಿಗೆ ಸೌಲಭ್ಯಗಳನ್ನು ನೀಡಲು ಕ್ರಮಕೈಗೊಳ್ಳಬೇಕೆಂದು ಉಲ್ಲೇಖ(2)ರಲ್ಲಿ ಸರ್ಕಾರದಿಂದ ಆದೇಶವಾಗಿರುತ್ತದೆ.

ಈಗಾಗಲೇ 2013-14ನೇ ಸಾಲಿನಲ್ಲಿ ಆಯೋಜಿಸಿಕೊಳ್ಳಲಾಗಿದ್ದ ಶಾಲಾ ಮುಖೇನವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ವಿತರಿಸುವ ಕಾರ್ಯಕ್ರಮದಡಿಯಲ್ಲಿ, 1.03ಲಕ್ಷ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುತ್ತದೆ. ಅಲ್ಲದೇ, ಪ್ರಸ್ತುತ, ಓವರ್ ದ ಕೌಂಟರ್ ಸೇವೆಯಡಿಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ವಿತರಿಸುವ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಪ್ರಾರಂಭಿಸಲಾಗುತ್ತಿದೆ.

ಆದ್ದರಿಂದ, ವಿದ್ಯಾರ್ಥಿಗಳಿಂದ ಶಾಲಾ ಪ್ರವೇಶಕ್ಕಾಗಿ ದಾಖಲೆಯಾಗಿ ಒದಗಿಸಬೇಕಾಗಿರುವ ಮುದ್ರಿಸಿದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳಿಗಾಗಿ ಕಡ್ಡಾಯ ಪಡಿಸದೇ, ವಿದ್ಯಾರ್ಥಿಗಳು ಅರ್ಜಿಯಲ್ಲಿ ನಮೂದಿಸುವ ಪ್ರಮಾಣ ಪತ್ರಗಳ ವಿಶಿಷ್ಟ ಗಣಕೀಕೃತ ಸಂಖ್ಯೆಯನ್ನು ನಾಡಕಛೇರಿ ವೆಬ್‌ಸೈಟ್ www.nadakacherikarnataka.gov.in

ಮೂಲಕ ವೀಕ್ಷಿಸಿ, ಸದರಿ ಪ್ರಮಾಣ ಪತ್ರಗಳ ನೈಜತೆಯನ್ನು ಪರಿಶೀಲಿಸಿ, ಪ್ರಮಾಣ ಪತ್ರಗಳನ್ನು ಅಂಗೀಕರಿಸಿಕೊಳ್ಳಬೇಕೆಂದು ತಿಳಿಸಿದೆ. ಹೆಚ್ಚಿನ ವಿವರಗಳಿಗೆ ಮೇಲ್ಕಂಡ ನಾಡಕಛೇರಿ ವೆಬ್‌ಸೈಟನ್ನು ವೀಕ್ಷಿಸಲು ತಿಳಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.
2. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.
3. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.
4. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಡಯೆಟ್ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
2. ಆಯುಕ್ತರು, ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಮತ್ತು ನಿರ್ದೇಶಕರು, ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯ, ಕೆ.ಆರ್. ವೃತ್ತ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.